# All India Radio: Bangalore
# National Bulletins In Kannada
# 25.06.2025 / 7.35 am

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ದೇಶಾದ್ಯಂತ ಇಂದು ಸಂವಿಧಾನ ಹತ್ಯಾ ದಿನ ಆಚರಣೆ

೨. ಭಾರತೀಯ ಗಗನಯಾತ್ರಿ ಶುಭಾಂಶು ಶುಕ್ಲಾ ಇಂದು ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ಪಯಣ

೩. ಎಸ್‌ಸಿಒ ರಕ್ಷಣಾ ಸಹಕಾರ ಸಭೆಯಲ್ಲಿಂದು ಕೇಂದ್ರ ಸಚಿವ ರಾಜನಾಥ್ ಸಿಂಗ್ ಭಾಗಿ

೪. ಒಸ್ಟ್ರಾವಾ ಗೋಲ್ಡನ್ ಸ್ಪೈಕ್ ಕ್ರೀಡಾಕೂಟ; ಜಾವೆಲಿನ್ ಥ್ರೋ ಸ್ಪರ್ಧೆಯಲ್ಲಿ ನೀರಜ್ ಚೋಪ್ರಾಗೆ ಚಿನ್ನ

೫. ಆಂಡರ್ಸನ್-ತೆಂಡೂಲ್ಕರ್ ಟ್ರೊಫಿ ಟೆಸ್ಟ್ ಕ್ರಿಕೆಟ್; ಮೊದಲ ಪಂದ್ಯದಲ್ಲಿ ಭಾರತದ ವಿರುದ್ಧ ಇಂಗ್ಲೆಂಡ್‌ಗೆ ಗೆಲುವು

**<><*<><>*><>**

ದೇಶಾದ್ಯಂತ ಇಂದು ಸಂವಿಧಾನ ಹತ್ಯಾ ದಿನವನ್ನು ಆಚರಿಸಲಾಗುತ್ತಿದೆ. ಈ ದಿನವು, ೧೯೭೫ರ ಜೂನ್ ೨೫ರಂದು ಭಾರತದ ಸಂವಿಧಾನದ ಆಶಯಗಳನ್ನು ಪ್ರತಿಬಂಧಿಸಿದ ಘಟನೆಯನ್ನು ನೆನಪಿಸಿಕೊಳ್ಳುವ ದಿನವಾಗಿದೆ. ಇದು ಭಾರತೀಯ ಇತಿಹಾಸದ ಅಂಧಕಾರಮಯ ಅವಧಿಯಾದ ತುರ್ತು ಪರಿಸ್ಥಿತಿಯ ಅತಿರೇಕಗಳಿಂದ ಪೀಡಿತಗೊಂಡ ಪ್ರತಿಯೊಬ್ಬನಿಗೂ ಶ್ರದ್ಧಾಂಜಲಿ ಸಲ್ಲಿಸುವ ದಿನವೂ ಹೌದು. ತುರ್ತು ಪರಿಸ್ಥಿತಿಯಲ್ಲಿ ನಾಗರಿಕ ಹಕ್ಕುಗಳನ್ನು ಅಮಾನತುಗೊಳಿಸಲಾಯಿತು. ಮಾಧ್ಯಮಗಳ ಮೇಲೆ ಕಟ್ಟುನಿಟ್ಟಿನ ಸೆನ್ಸಾರ್ ಜಾರಿಗೊಂಡಿತು. ಪ್ರಭುತ್ವವಿರೋಧಿ ಪತ್ರಿಕೆಗಳ ಜಾಹಿರಾತುಗಳನ್ನು ತಡೆದು, ಅವುಗಳ ದಮನಕ್ಕೆ ಪ್ರಯತ್ನಿಸಲಾಯಿತು. ಪತ್ರಕರ್ತರ ಮೇಲೆ ತೆರಿಗೆ ವಂಚನೆ ಪ್ರಕರಣ ದಾಖಲು, ನಿರ್ಬಂಧಗಳು ಹಾಗೂ ಹಲವರನ್ನು ಜೈಲಿಗೆ ಹಾಕಲಾಯಿತು. ಜಯಪ್ರಕಾಶ್ ನಾರಾಯಣ್, ಎಲ್.ಕೆ.ಅಡ್ವಾಣಿ, ಅಟಲ್ ಬಿಹಾರಿ ವಾಜಪೇಯಿ, ಮೊರಾರ್ಜಿ ದೇಸಾಯಿ, ಮಧು ದಂಡವತೆ ಸೇರಿದಂತೆ ಅನೇಕ ವಿರೋಧಪಕ್ಷ ನಾಯಕರನ್ನು ಬಂಧಿಸಲಾಯಿತು. ಈ ಕ್ರಮಗಳಿಗೆ ದೇಶಾದ್ಯಾಂತ ತೀವ್ರ ವಿರೋಧ ವ್ಯಕ್ತವಾಯಿತು. 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ಮಾತನಾಡಿದ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ತುರ್ತು ಪರಿಸ್ಥಿತಿಯ ಘೋಷಣೆಯನ್ನು ಭಾರತದ ಪ್ರಜಾಸತ್ತಾತ್ಮಕತೆಯ ಮೇಲೆ ಇರುವ "ಕಪ್ಪು ಕಲೆ" ಎಂದು ವಿವರಿಸಿದ್ದರು. ಈ ಅವಧಿಯಲ್ಲಿ ಹಲವಾರು ರಾಜಕೀಯ ಸ್ಥಿತ್ಯಂತರಗಳು ನಡೆದವು. ಗುಜರಾತಿನಲ್ಲಿ ನವನಿರ್ಮಾಣ ಚಳವಳಿ, ಬಿಹಾರದಲ್ಲಿ ಜಯಪ್ರಕಾಶ್ ನಾರಾಯಣ್ ಅವರ ಚಳವಳಿ ಮತ್ತು ಜಾರ್ಜ್ ಫರ್ನಾಂಡೀಸ್ ನೇತೃತ್ವದ ರೈಲ್ವೆ ಬಂಡಾಯವು ಪ್ರಮುಖವಾಗಿತ್ತು. ಆ ಸಮಯದಲ್ಲಿ ನಿರಪರಾಧಿಗಳಾದ ಹಲವರನ್ನು ಬಂಧಿಸಲಾಯಿತು. ಅಕ್ರಮ ಕಾಯ್ದೆಗಳು ಜಾರಿಯಾದವು. ತುರ್ತು ಪರಿಸ್ಥಿತಿಯ ಅವಧಿ ಸ್ವಾತಂತ್ರ್ಯೋತ್ತರ ಭಾರತದ ಅಂಧಕಾರಮಯ ಅಧ್ಯಾಯವಾಗಿತ್ತು.

**<><*<><>*><>**

೧೯೭೫ ರಲ್ಲಿ ಕಾಂಗ್ರೆಸ್ ತುರ್ತು ಪರಿಸ್ಥಿತಿ ಹೇರಿದ್ದು, ದೇಶದ ಭದ್ರತೆಯನ್ನು ರಕ್ಷಿಸುವ ಸಲುವಾಗಿ ಅಲ್ಲ. ಬದಲಾಗಿ ಅಂದಿನ ಪ್ರಧಾನಿ ಇಂದಿರಾ ಗಾಂಧಿಯವರ ಅಧಿಕಾರವನ್ನು ಉಳಿಸುವ ಸಲುವಾಗಿ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಟೀಕಿಸಿದ್ದಾರೆ. ನವದೆಹಲಿಯಲ್ಲಿ ನಡೆದ 'ಆಪತ್ ಕಾಲದ ೫೦ ವರ್ಷಗಳು' ಎಂಬ ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ಅವರು, ಲಕ್ಷಾಂತರ ಜನರು ಈ ದೇಶದ ಪ್ರಜಾಪ್ರಭುತ್ವಕ್ಕಾಗಿ ಹೋರಾಡಲು ತಮ್ಮ ಜೀವ, ವೃತ್ತಿ ಮತ್ತು ಕುಟುಂಬಗಳನ್ನು ತ್ಯಾಗ ಮಾಡಿದ್ದಾರೆ ಎಂಬುದನ್ನು ಎಲ್ಲರೂ ನೆನಪಿನಲ್ಲಿಡಬೇಕು. ಜನರು ಎಂದಿಗೂ ಸರ್ವಾಧಿಕಾರವನ್ನು ಸಹಿಸುವುದಿಲ್ಲವಾದ್ದರಿಂದ ದೇಶವು ಈ ಹೋರಾಟವನ್ನು ಗೆದ್ದಿದೆ ಎಂದು ಹೇಳಿದ್ದಾರೆ. ತುರ್ತು ಪರಿಸ್ಥಿತಿಯ ಸಮಯದಲ್ಲಿ ಪ್ರಜಾಪ್ರಭುತ್ವವನ್ನು ದುರ್ಬಲಗೊಳಿಸಿದ್ದು, ಕಾಂಗ್ರೆಸ್ ಪಕ್ಷ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಆರೋಪಿಸಿದ್ದಾರೆ.

**<><*<><>*><>**

ಭಾರತೀಯ ಗಗನಯಾತ್ರಿ ಶುಭಾಂಶು ಶುಕ್ಲಾ ಇಂದು ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ಯಾನ ಆರಂಭಿಸಲಿದ್ದಾರೆ. ಆಕ್ಸಿಯಮ್ -೪ ಮಿಷನ್ ಇಂದು ಮಧ್ಯಾಹ್ನ ೧೨ ಗಂಟೆ ಒಂದು ನಿಮಿಷಕ್ಕೆ ಅಮೆರಿಕದ ಫ್ಲೋರಿಡಾದಲ್ಲಿರುವ ನಾಸಾದ ಕೆನಡಿ ಬಾಹ್ಯಾಕಾಶ ಕೇಂದ್ರದಿಂದ ಉಡಾವಣೆಯಾಗಲಿದೆ. ಆರಂಭದಲ್ಲಿ ಮೇ ೨೯ ರಂದು ಪ್ರಾರಂಭವಾಗಬೇಕಿದ್ದ ಆಕ್ಸ್ -೪ ಮಿಷನ್‌ನ ಉಡಾವಣೆಯು ತಾಂತ್ರಿಕ ಸಮಸ್ಯೆ, ಹವಾಮಾನ ಪರಿಸ್ಥಿತಿ ಮತ್ತು ಇತರೆ ಕಾರಣಗಳಿಗಾಗಿ ಪದೇ ಪದೆ ವಿಳಂಬವಾಗುತ್ತಿದೆ.

<><*<><>*><>

ಚೀನಾದ ಕ್ವಿಂಗ್ದಾವೊದಲ್ಲಿ ಇಂದು ಆರಂಭವಾಗಲಿರುವ ಶಾಂಘೈ ಸಹಕಾರ ಸಂಘಟನೆ-ಎಸ್‌ಸಿಒ ರಕ್ಷಣಾ ಸಚಿವರ ಸಭೆಯಲ್ಲಿ ಉನ್ನತ ಮಟ್ಟದ ಭಾರತೀಯ ನಿಯೋಗದ ನೇತೃತ್ವವನ್ನು ರಕ್ಷಣಾ ಸಚಿವ ರಾಜನಾಥ್ ಸಿಂಗ್ ವಹಿಸಲಿದ್ದಾರೆ. ಎರಡು ದಿನಗಳ ಈ ಸಭೆಯಲ್ಲಿ, ಎಸ್‌ಸಿಒ ಸದಸ್ಯ ರಾಷ್ಟ್ರಗಳ ರಕ್ಷಣಾ ಸಚಿವರು, ಪ್ರಾದೇಶಿಕ ಮತ್ತು ಅಂತಾರಾಷ್ಟ್ರೀಯ ಭದ್ರತೆ, ಭಯೋತ್ಪಾದನಾ ನಿಗ್ರಹ ಪ್ರಯತ್ನಗಳು ಮತ್ತು ರಕ್ಷಣಾ ಸಚಿವಾಲಯಗಳ ನಡುವಿನ ವರ್ಧಿತ ಸಹಕಾರ ಸೇರಿದಂತೆ ಪ್ರಮುಖ ವಿಷಯಗಳ ಬಗ್ಗೆ ಚರ್ಚಿಸುವ ನಿರೀಕ್ಷೆಯಿದೆ. ಸಭೆಯ ಹೊರತಾಗಿ, ರಕ್ಷಣಾ ಸಚಿವ ರಾಜನಾಥ್ ಸಿಂಗ್, ಚೀನಾ, ರಷ್ಯಾ ಸೇರಿದಂತೆ ಹಲವಾರು ದೇಶಗಳ ರಕ್ಷಣಾ ಸಚಿವರೊಂದಿಗೆ ದ್ವಿಪಕ್ಷೀಯ ಸಭೆಗಳನ್ನು ನಡೆಸಲಿದ್ದಾರೆ.

<><*<><>*><>

ಭಯೋತ್ಪಾದನೆಯ ವಿರುದ್ಧದ ಹೋರಾಟದಲ್ಲಿ ದ್ವಿಮುಖ ನೀತಿಗಳನ್ನು ತ್ಯಜಿಸುವುದು ಹಾಗೂ ವಿಶ್ವಸಂಸ್ಥೆಯಿಂದ ನಿಷೇಧಿಸಲ್ಪಟ್ಟ ಭಯೋತ್ಪಾದಕರು ಮತ್ತು ಸಂಸ್ಥೆಗಳ ವಿರುದ್ಧ ನಿರ್ಣಾಯಕ ಕ್ರಮಗಳನ್ನು ತೆಗೆದುಕೊಳ್ಳುವುದು ತುರ್ತು ಅಗತ್ಯವಿದೆ ಎಂದು ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಕರೆ ನೀಡಿದರು. ಬೀಜಿಂಗ್‌ನಲ್ಲಿ ನಡೆದ ಶಾಂಘೈ ಸಹಕಾರ ಸಂಸ್ಥೆ-ಎಸ್‌ಸಿಒ ಸದಸ್ಯ ರಾಷ್ಟ್ರಗಳ ಭದ್ರತಾ ಮಂಡಳಿ ಕಾರ್ಯದರ್ಶಿಗಳ ೨೦ನೇ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಭಯೋತ್ಪಾದನೆಯ ವಿರುದ್ಧದ ಹೋರಾಟದಲ್ಲಿ ದ್ವಿಮುಖ ನೀತಿಗಳನ್ನು ತಿರಸ್ಕರಿಸುವ ಮತ್ತು ಭಯೋತ್ಪಾದಕರ ವಿರುದ್ಧ ನಿರ್ಣಾಯಕ ಕ್ರಮಗಳನ್ನು ತೆಗೆದುಕೊಳ್ಳುವ ಮತ್ತು ಅವರ ಭಯೋತ್ಪಾದಕ ಪರಿಸರ ವ್ಯವಸ್ಥೆಗಳನ್ನು ಕೆಡವುವ ಅಗತ್ಯವನ್ನು ಒತ್ತಿ ಹೇಳಿದರು. ಲಷ್ಕರ್-ಎ-ತೈಬಾ, ಜೈಶ್-ಎ-ಮೊಹಮ್ಮದ್, ಅಲ್ ಖೈದಾ, ISIS ಮತ್ತು ಅದರ ಅಂಗಸಂಸ್ಥೆಗಳು ಸೇರಿದಂತೆ ವಿಶ್ವಸಂಸ್ಥೆ ಗೊತ್ತುಪಡಿಸಿದ ಭಯೋತ್ಪಾದಕ ಗುಂಪುಗಳಿಂದ ನಡೆಯುತ್ತಿರುವ ಬೆದರಿಕೆಯ ಬಗ್ಗೆ ಅಜಿತ್ ದೋವಲ್ ತೀವ್ರ ಕಳವಳ ವ್ಯಕ್ತಪಡಿಸಿದರು. ಇವುಗಳಲ್ಲಿ ಹಲವು ಭಯೋತ್ಪಾದಕ ಸಂಘಟನೆಗಳು ಪಾಕಿಸ್ತಾನ ಸರ್ಕಾರದ ಬೆಂಬಲದೊಂದಿಗೆ ಕಾರ್ಯನಿರ್ವಹಿಸುತ್ತಿವೆ ಎಂದು ಆರೋಪಿಸಿದರು. ಇದಕ್ಕೂ ಮೊದಲು, ಎಸ್‌ಸಿಒ ಭದ್ರತಾ ಮಂಡಳಿ ಕಾರ್ಯದರ್ಶಿಗಳ ಸಭೆಯಲ್ಲಿ ಅಜಿತ್ ದೋವಲ್, ಚೀನಾದ ಉಪಾಧ್ಯಕ್ಷ ಹಾನ್ ಝೆಂಗ್ ಮತ್ತು ಇತರ ನಿಯೋಗದ ಮುಖ್ಯಸ್ಥರನ್ನು ಭೇಟಿಯಾಗಿ ಮಾತುಕತೆ ನಡೆಸಿದರು. ಪ್ರಮುಖ ದ್ವಿಪಕ್ಷೀಯ, ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ರಷ್ಯಾದ ಉಪ ಕಾರ್ಯದರ್ಶಿ ಅಲೆಕ್ಸಾಂಡರ್ ವೆನೆಡಿಕ್ಟೋವ್ ಅವರೊಂದಿಗೆ ಅಜಿತ್ ದೋವಲ್ ಮಾತುಕತೆ ನಡೆಸಿದರು.

<><*<><>*><>

ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಅವರು, ಇಂದಿನಿಂದ ಮೂರು ದಿನಗಳ ಕಾಲ ಉತ್ತರಾಖಂಡದ ನೈನಿತಾಲ್‌ಗೆ ಭೇಟಿ ನೀಡಲಿದ್ದಾರೆ. ಅವರು, ಕುಮೌನ್ ವಿಶ್ವವಿದ್ಯಾಲಯದ ಸುವರ್ಣ ಮಹೋತ್ಸವ ಆಚರಣೆಯ ಅಧ್ಯಕ್ಷತೆ ವಹಿಸಿದ್ದು, ಸಂಸ್ಥೆಯ ವಿದ್ಯಾರ್ಥಿಗಳು ಮತ್ತು ಅಧ್ಯಾಪಕರನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಶುಕ್ರವಾರ ಉಪರಾಷ್ಟ್ರಪತಿಗಳು ಶೇರ್ವುಡ್ ಕಾಲೇಜಿನ ೧೫೬ನೇ ಸಂಸ್ಥಾಪಕರ ದಿನಾಚರಣೆಯ ಮುಖ್ಯ ಅತಿಥಿಯಾಗಿ ಅಧ್ಯಕ್ಷತೆ ವಹಿಸಲಿದ್ದಾರೆ.

<><*<><>*><>

ರಕ್ಷಣಾ ಸಚಿವ ರಾಜನಾಥ್ ಸಿಂಗ್, ಸೇನಾ ಮುಖ್ಯಸ್ಥರು ಮತ್ತು ಮಿಲಿಟರಿ ವ್ಯವಹಾರಗಳ ಇಲಾಖೆಯ ಕಾರ್ಯದರ್ಶಿಯವರಿಗೆ ಮೂರೂ ರಕ್ಷಣಾ ಸೇವೆಗಳಿಗೂ ಜಂಟಿ ಸೂಚನೆಗಳು ಮತ್ತು ಆದೇಶಗಳನ್ನು ಹೊರಡಿಸಲು ಅಧಿಕಾರ ನೀಡಿದ್ದಾರೆ. ಇದು ಸಶಸ್ತ್ರ ಪಡೆಗಳ ಆಧುನೀಕರಣ ಮತ್ತು ರೂಪಾಂತರದತ್ತ ಒಂದು ಪ್ರಮುಖ ಹೆಜ್ಜೆಯಾಗಿದೆ. ಈ ಉಪಕ್ರಮವು, ಮೂರು ರಕ್ಷಣಾ ಸೇವೆಗಳಲ್ಲಿ ಸುಧಾರಿತ ಪಾರದರ್ಶಕತೆ, ಸಮನ್ವಯ ಮತ್ತು ಆಡಳಿತಾತ್ಮಕ ದಕ್ಷತೆಗೆ ಅಡಿಪಾಯ ಹಾಕುತ್ತದೆ. ಇದು ಜಂಟಿ ಮತ್ತು ಏಕೀಕರಣದ ಹೊಸ ಯುಗದ ಆರಂಭವನ್ನು ಸೂಚಿಸುತ್ತದೆ. ರಾಷ್ಟ್ರಕ್ಕೆ ಸೇವೆ ಸಲ್ಲಿಸುವಲ್ಲಿ ಸಶಸ್ತ್ರ ಪಡೆಗಳ ಉದ್ದೇಶದ ಏಕತೆಯನ್ನು ಬಲಪಡಿಸುತ್ತದೆ.

<><*<><>*><>

ಕಲ್ಲಿದ್ದಲು ಸರಕು ಮತ್ತು ಸಾರಿಗೆ ವ್ಯವಸ್ಥೆಗಳ ದಕ್ಷತೆಯನ್ನು ಪರಿಶೀಲಿಸಲು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಹಾಗೂ ಕೇಂದ್ರ ಕಲ್ಲಿದ್ದಲು ಮತ್ತು ಗಣಿ ಸಚಿವ ಜಿ.ಕಿಶನ್ ರೆಡ್ಡಿ ನಡುವೆ ನವದೆಹಲಿಯಲ್ಲಿ ನಿನ್ನೆ ಉನ್ನತ ಮಟ್ಟದ ಸಭೆ ನಡೆಯಿತು. ಸಿಲೋ ಲೋಡಿಂಗ್ ಮೂಲಸೌಕರ್ಯವನ್ನು ವೇಗಗೊಳಿಸುವ ಬಗ್ಗೆ ಚರ್ಚೆಯನ್ನು ಕೇಂದ್ರೀಕರಿಸಲಾಯಿತು. ಸಿಲೋ ಲೋಡಿಂಗ್ ಎಂದರೆ ಮುಂಭಾಗದ ಲೋಡರ್‌ಗಳು ಅಥವಾ ಹಸ್ತಚಾಲಿತ ಸಲಿಕೆ ಮುಂತಾದ ಸಾಂಪ್ರದಾಯಿಕ ವಿಧಾನಗಳನ್ನು ಬಳಸುವ ಬದಲು, ಕಲ್ಲಿದ್ದಲಿನಂತಹ ಬೃಹತ್ ವಸ್ತುಗಳನ್ನು ರೈಲ್ವೆ ಸರಕು ಸಾಗಣೆ ಬೋಗಿಗಳಿಗೆ ನೇರವಾಗಿ ಶೇಖರಣಾ ಸಿಲೋದಿಂದ ಲೋಡ್ ಮಾಡುವ ಯಾಂತ್ರೀಕೃತ ಪ್ರಕ್ರಿಯೆಯಾಗಿದೆ. ರೈಲ್ವೆ ಸಚಿವಾಲಯದ ಪ್ರಕಾರ, ಸಿಲೋಗಳ ಮೂಲಕ ಲೋಡ್ ಮಾಡಲಾದ ಕಲ್ಲಿದ್ದಲಿನ ಪಾಲು ೨೦೨೨-೨೩ರಲ್ಲಿ ಶೇಕಡಾ ೧೮.೮ ರಿಂದ

೨೦೨೫-೨೬ರಲ್ಲಿ ಶೇಕಡಾ ೨೯ ಕ್ಕೆ ಗಮನಾರ್ಹ ಏರಿಕೆಯಾಗಿದೆ. ಅಲ್ಲದೇ ಎಲ್ಲಾ ಉಷ್ಣ ವಿದ್ಯುತ್ ಸ್ಥಾವರಗಳಲ್ಲಿನ ಕಲ್ಲಿದ್ದಲು ದಾಸ್ತಾನು ಸಾರ್ವಕಾಲಿಕ ಗರಿಷ್ಠ ೬೧.೩ ಮಿಲಿಯನ್ ಟನ್‌ಗಳನ್ನು ತಲುಪಿದೆ.

**<><*<><>*><>**

ಅಥ್ಲೆಟಿಕ್ಸ್‌ನಲ್ಲಿ, ಎರಡು ಬಾರಿ ಒಲಿಂಪಿಕ್ ಪದಕ ವಿಜೇತ ನೀರಜ್ ಚೋಪ್ರಾ, ಜೆಕ್ ಗಣರಾಜ್ಯದಲ್ಲಿ ನಡೆದ ಒಸ್ಟ್ರಾವಾ ಗೋಲ್ಡನ್ ಸ್ಪೈಕ್ ೨೦೨೫ ರ ಕ್ರೀಡಾಕೂಟದಲ್ಲಿ ಜಾವೆಲಿನ್ ಥ್ರೋ ಪ್ರಶಸ್ತಿಯನ್ನು ಗೆದ್ದಿದ್ದಾರೆ. ೨೭ ವರ್ಷದ ಭಾರತೀಯ ಆಟಗಾರ ನಿನ್ನೆ ರಾತ್ರಿ ನಡೆದ ಸ್ಪರ್ಧೆಯಲ್ಲಿ ೮೫.೨೯ ಮೀಟರ್ ಎಸೆದು ಚಿನ್ನದ ಪದಕ ವಿಜೇತರಾದರು. ದಕ್ಷಿಣ ಆಫ್ರಿಕಾದ ಡೌ ಸ್ಮಿಟ್ ೮೪.೧೨ ಮೀಟರ್ ಎಸೆದು ಎರಡನೇ ಸ್ಥಾನ ಪಡೆದರು. ಗ್ರಾನಡಾದ ಆಂಡರ್ಸನ್ ಪೀಟರ್ಸ್ ೮೩.೬೩ ಮೀಟರ್ ಎಸೆದು ಮೂರನೇ ಸ್ಥಾನ ಪಡೆದರು. ಜುಲೈ ೫ ರಂದು ಬೆಂಗಳೂರಿನ ಶ್ರೀ ಕಂಠೀರವ ಕ್ರೀಡಾಂಗಣದಲ್ಲಿ ನಡೆಯಲಿರುವ ಭಾರತದ ಮೊದಲ ಜಾಗತಿಕ ಜಾವೆಲಿನ್ ಸ್ಪರ್ಧೆಯಾದ ನೀರಜ್ ಚೋಪ್ರಾ ಕ್ಲಾಸಿಕ್‌ನಲ್ಲಿ ನೀರಜ್ ಚೋಪ್ರಾ ಭಾಗವಹಿಸಲಿದ್ದಾರೆ.

**<><*<><>*><>**

ಇಂಗ್ಲೆಂಡ್‌ನ ಲೀಡ್ಸ್‌ನ ಹೆಡಿಂಗ್ಲಿಯಲ್ಲಿ ನಡೆದ ಆಂಡರ್ಸನ್-ತೆಂಡೂಲ್ಕರ್ ಕ್ರಿಕೆಟ್ ಟ್ರೋಫಿಯ ಮೊದಲ ಟೆಸ್ಟ್ ಪಂದ್ಯದಲ್ಲಿ ಭಾರತದ ವಿರುದ್ಧ ಇಂಗ್ಲೆಂಡ್ ೫ ವಿಕೆಟ್‌ಗಳಿಂದ ಜಯ ದಾಖಲಿಸಿದೆ. ಈ ಮೂಲಕ ೫ ಟೆಸ್ಟ್‌ಗಳ ಸರಣಿಯಲ್ಲಿ ೧-೦ ಅಂತರದಿಂದ ಮುನ್ನಡೆ ಸಾಧಿಸಿದೆ. ಮೊದಲ ಇನ್ನಿಂಗ್ಸ್‌ನಲ್ಲಿ ಭಾರತ ೪೭೧ ರನ್ ಗಳಿಸಿತು. ಇದಕ್ಕೆ ಉತ್ತರವಾಗಿ ಇಂಗ್ಲೆಂಡ್ ೪೬೫ ರನ್ ಪೇರಿಸಿತು. ಎರಡನೇ ಇನ್ನಿಂಗ್ಸ್‌ನಲ್ಲಿ ಭಾರತ ೩೬೪ ರನ್‌ಗಳಿಗೆ ತನ್ನೆಲ್ಲಾ ವಿಕೆಟ್‌ಗಳನ್ನು ಕಳೆದುಕೊಂಡಿತು. ಭಾರತ ಒಡ್ಡಿದ ಸವಾಲನ್ನು ಸ್ವೀಕರಿಸಿದ ಇಂಗ್ಲೆಂಡ್, ೫ ವಿಕೆಟ್‌ಗಳಿಗೆ ೩೭೩ ರನ್ ಗಳಿಸಿ ಗೆಲುವಿನ ನಗೆ ಬೀರಿತು.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ <>*><>**